ನಿ.330 (78)

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ವೀಣಾ ಅಚ್ಚಯ್ಯ ಎಸ್. ಇವರು ನಿಯಮ–330ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರ ಉತ್ತರ

ವಿಷಯ: ಕೊಡಗು ಜಿಲ್ಲೆಯಲ್ಲಿ ವನ್ಯಪ್ರಾಣಿ–ಮಾನವ ಸಂಘರ್ಷ ಮಿತಿ ಮೀರಿದ್ದು, ಹುಲಿ ಹಾಗೂ ಕಾಡಾನೆಗಳ ನಿರಂತರ ದಾಳಿಯಿಂದ ಜೀವಹಾನಿ, ಬೆಳೆಹಾನಿಯಿಂದ ತತ್ತರಿಸಿ ಪ್ರತಿನಿತ್ಯವೂ ಜನರು ಭಯದ ವಾತಾವರಣದಲ್ಲೇ ಬದುಕುತ್ತಿರುವ ಗಂಭೀರ ಸಮಸ್ಯೆ ಕುರಿತು.

* * * *

ಉತ್ತರ:

ಕೊಡಗು ಜಿಲ್ಲೆಯಲ್ಲಿ ವನ್ಯಪ್ರಾಣಿ–ಮಾನವ ಸಂಘರ್ಷ ತಡೆಯಲು ಮುನ್ನೆಚ್ಚರಿಕೆಯ ಕ್ರಮವಾಗಿ ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

1. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019–20ನೇ ಸಾಲಿನಿಂದ ರೂ.5.00 ಕೋಟಿ ವೆಚ್ಚದಲ್ಲಿ ಲಂಟಾನ ಮತ್ತು ಯುಪಟೋರಿಯಂ ಕಳೆಗಳ ನಿರ್ಮೂಲನೆ ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತಹಂತವಾಗಿ ಕಿತ್ತು ಸ್ವಚ್ಛಗೊಳಿಸಿ, ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ.
2. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ 47 ಸಂಖ್ಯೆ ಕೆರೆ ನಿರ್ಮಾಣ ಮತ್ತು 66 ಹಾಲಿ ಇರುವ ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ.
3. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ 34.35 ಕಿ.ಮೀ ಸೋಲಾರ್ ತಂತಿ ಬೇಲಿ ನಿರ್ಮಾಣ ಮಾಡಲಾಗಿದ್ದು, 161.60 ಕಿ.ಮೀ. ನಿರ್ವಹಣೆ ಮಾಡಲಾಗಿದೆ. 91.553 ಕಿ.ಮೀ. ಆನೆ ತಡೆ ಕಂದಕ ನಿರ್ಮಾಣ ಮಾಡಲಾಗಿದ್ದು, 140.69 ಕಿ.ಮೀ. ನಿರ್ವಹಣೆ ಮಾಡಲಾಗಿದೆ. 33.37 ಕಿ.ಮೀ. ತೂಗು ಸೋಲಾರ್ ತಂತಿ ಬೇಲಿ ನಿರ್ಮಾಣ ಮಾಡಲಾಗಿದೆ. 496.176 ಟನ್ ಉಪಯೋಗಿತ ರೈಲು ಹಳಿಗಳನ್ನು ಖರೀದಿಸಿದ್ದು, 24.625 ಉಪಯೋಗಿತ ರೈಲು ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಾಣ ಮಾಡಲಾಗಿದೆ.
4. ಕೊಡಗು ಜಿಲ್ಲೆಯ ಅರಣ್ಯ ವೃತ್ತದ ವ್ಯಾಪ್ತಿಯ ವಲಯಗಳಲ್ಲಿ ಕಾಡಾನೆ ಹಾವಳಿಯನ್ನು ತುರ್ತು ನಿರ್ವಹಣೆ 52 ಸಂಖ್ಯೆ ಕ್ಷಿಪ್ರ ಸ್ಪಂದನ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ.
5. ಆಯ್ದ ವಲಯಗಳಲ್ಲಿ 71 ಸಂಖ್ಯೆ ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸುವ ತಂಡ ರಚನೆ ಮಾಡಲಾಗಿರುತ್ತದೆ.
6. ಕೊಡಗು ಜಿಲ್ಲೆಯಲ್ಲಿ 2014 ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿರುತ್ತದೆ

......2

7. ಕಾಡಾನೆ ಇರುವಿಕೆ ಅವುಗಳ ಚಲನವಲನಗಳ ಬಗ್ಗೆ ಸಾರ್ವಜನಿಕರಿಗೆ ರೈತರಿಗೆ ಮಾಹಿತಿ ನೀಡುವ SMS Alert System ಕಾರ್ಯ ನಿರ್ವಹಿಸುತ್ತಿದೆ.
8. ಕಳ್ಳಬೇಟೆ ತಡೆ ಶಿಬಿರಗಳಿಗೆ ಹಾಗೂ **Rapid Response Teams (RRT)** ಗಳನ್ನು ಅಂದರೆ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ **Wireless Networking** ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
9. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ.
10. ಕಾಡಾನೆ ಗುಂಪಿನಲ್ಲಿರುವ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ, ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ. ವಿರಾಜಪೇಟೆ ವಿಭಾಗದಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್‌ಗಳನ್ನು ಅಳವಡಿಸಿ ಅವುಗಳ ಚಲನ ವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.
11. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.
12. ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

12 ವನ್ಯಪ್ರಾಣಿಗಳ ರಕ್ಷಣಾ ದೃಷ್ಟಿಯಿಂದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ 37 ವನ್ಯಪ್ರಾಣಿ ಹತ್ಯೆ ತಡೆ ಶಿಬಿರಗಳನ್ನು ಸ್ಥಾಪನೆ ಮಾಡಿ ಪ್ರತಿದಿನ ಗಸ್ತು ಮಾಡಿ ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

13. ಈ ರಕ್ಷಣಾ ಕಾರ್ಯದ ಸಿಬ್ಬಂದಿಗಳಿಗೆ ಹಾಗೂ ಇಲಾಖಾ ಸಿಬ್ಬಂದಿಗಳಿಗೆ ವೈರ್‌ಲೆಸ್ ವಾಕಿ ಟಾಕಿ, ಶಸ್ತ್ರಾಸ್ತ್ರ ಆಹಾರ ಸಾಮಗ್ರಿಗಳನ್ನು ಒದಗಿಸಿ ಪರಿಣಾಮಕಾರಿಯಾಗಿ ರಕ್ಷಣಾ ಕಾರ್ಯ ಕೈಗೊಳ್ಳಲಾಗುತ್ತಿದೆ.
14. ಮಾನವ-ಪ್ರಾಣಿ ಸಂಘರ್ಷವನ್ನು ತಡೆಯಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳಲು **"ಕೊಡಗು ಮಾನವ-ವನ್ಯಪ್ರಾಣಿ ಸಂಘರ್ಷ ಉಪಶಮನ ಪ್ರತಿಷ್ಠಾನ"** ವನ್ನು ವೃತ್ತ ಮಟ್ಟದಲ್ಲಿ ಸ್ಥಾಪಿಸಲಾಗಿದೆ.

ಅಲ್ಲದೆ ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಿಸಲು ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.

| ಕ್ರ ಸಂ. | ಕಾಮಗಾರಿಗಳ ವಿವರ | 2019-20 | 2020-21 |
|---|---|---|---|
| | | ಭೌತಿಕ | ಭೌತಿಕ |
| 1 | ಆನೆ ನಿರೋಧಕ ಕಂದಕ ನಿರ್ಮಾಣ (ಕಿ.ಮೀ) | 10.31 | 28.5 |
| 2 | ಹಾಲಿ ಇರುವ ಆನೆ ನಿರೋಧಕ ಕಂದಕ ನಿರ್ವಹಣೆ (ಕಿ.ಮೀ) | 43.16 | 3.35 |
| 3 | ಸೋಲಾರ್ ಬೇಲಿ ನಿರ್ಮಾಣ (ಕಿ.ಮೀ) | 2.50 | 0.2 |

......3

| ಕ್ರ ಸಂ. | ಕಾಮಗಾರಿಗಳ ವಿವರ | 2019–20 | 2020–21 |
|---|---|---|---|
| | | ಭೌತಿಕ | ಭೌತಿಕ |
| 4 | ಹಾಲಿ ಇರುವ ಸೋಲಾರ್ ಬೇಲಿ ನಿರ್ವಹಣೆ (ಕಿ.ಮೀ) | 20.00 | 26.6 |
| 5 | ಕೆರೆ ನಿರ್ಮಾಣ (ಸಂಖ್ಯೆ) | 12 | 3 |
| 6 | ಕೆರೆ ಹೂಳೆತ್ತುವಿಕೆ (ಸಂಖ್ಯೆ) | 16 | 6 |
| 7 | ಆಂಟಿ ಡಿಪ್ರಡೇಷನ್ ಕ್ಯಾಂಪ್ ನಿರ್ವಹಣೆ (ಸಂಖ್ಯೆ) | 22 | 11 |
| 8 | ಆರ್.ಆರ್.ಟಿ ತಂಡದ ರಚನೆ (ಸಂಖ್ಯೆ) | 1 | 36 |
| 9 | 50:50 ಅನುಪಾತದಲ್ಲಿ ಸೋಲಾರ್ ತಂತಿ ಬೇಲಿ ನಿರ್ಮಾಣ (ಕಿ.ಮೀ) | 2.174 | 0.87 |
| 10 | ತೂಗು ಸೋಲಾರ್ ತಂತಿ ಬೇಲಿ ನಿರ್ಮಾಣ (ಕಿ.ಮೀ) | 33.37 | – |
| 11 | ಉಪಯೋಗಿತ ರೈಲು ಹಳಿ ಉಪಯೋಗಿಸಿ ಬ್ಯಾರಿಕೇಡ್ ನಿರ್ಮಾಣ(ಕಿ.ಮೀ.) | 24.625 | – |

ದಿನಾಂಕ : 08.03.2021 ರಂದು ವಿರಾಜಪೇಟೆ ವಿಭಾಗದ ಪೊನ್ನಂಪೇಟೆ ತಾಲ್ಲೂಕಿನ ಬೆಳ್ಳೂರು ಗ್ರಾಮದಲ್ಲಿ ತೋಟದ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಹುಲಿ ದಾಳಿಯಿಂದ ಶ್ರೀ ರಂಗಸ್ವಾಮಿ ಎಂಬುವವರು ಮೃತಪಟ್ಟಿದ್ದು ಹಾಗೂ ಅವರ ತಾತ ಶ್ರೀ ಕೆಂಚ ಎಂಬುವವರು ಮೇಲೆ ದಾಳಿ ನಡೆದಿರುವುದು ವರದಿಯಾಗಿರುತ್ತದೆ.

ಪೊನ್ನಂಪೇಟೆ ವಲಯ ವ್ಯಾಪ್ತಿಯಲ್ಲಿನ ಕಾಡಂಚಿನ ಗ್ರಾಮಗಳಲ್ಲಿ ಮಾನವ–ಪ್ರಾಣ ಹಾನಿಗೆ ಕಾರಣವಾಗಿರುವ ಹುಲಿಯನ್ನು ನಿರ್ದಿಷ್ಟವಾಗಿ ಗುರುತಿಸಿ ಸೆರೆಹಿಡಿಯುವುದು ಅಸಾಧ್ಯವಾದಲ್ಲಿ ಮಾತ್ರ ಸದರಿ ಹುಲಿಯನ್ನು ಗುಂಡಿಕ್ಕುವುದನ್ನು ಕೊನೆಯ ಪ್ರಕ್ರಿಯೆಯನ್ನಾಗಿ ಪರಿಗಣಿಸಲು ವನ್ಯಜೀವಿ ಸಂರಕ್ಷಣಾ ಕಾಯ್ದೆ, 1972ರ ಸೆಕ್ಷನ್ 11(1)(ಎ) ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 08.03.2021 ರಲ್ಲಿ ಆದೇಶ ನೀಡಲಾಗಿದ್ದು, ಕಾರ್ಯಾಚರಣೆ ಪ್ರಗತಿಯಲ್ಲಿ ಇರುತ್ತದೆ.

**ಸಂಖ್ಯೆ: ಅಪಜೀ 49 ಎಫ್‌ಡಬ್ಲ್ಯೂಎಲ್ 2021**

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು